# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 658 |
| ಮಾನ್ಯ ಸದಸ್ಯರ ಹೆಸರು : | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ : | 11.12.2023 |
| ಉತ್ತರಿಸುವ ಸಚಿವರು : | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಬ್ರಿಮ್ಸ್ ಮಹಾವಿದ್ಯಾಲಯದಲ್ಲಿ ನಡೆದ ಸುಮಾರು 18 ಕೋಟಿ ರೂಪಾಯಿಯ ಹಗರಣದ ತನಿಖೆಗೆ 2019 ರಲ್ಲಿ ತಂದಿದ್ದ ನ್ಯಾಯಾಲಯದ ತಡೆಯಾಜ್ಞೆಯನ್ನು ತೆರವುಗೊಳಿಸದಿರಲು ಕಾರಣವೇನು; | ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ತಡೆಯಾಜ್ಞೆಯನ್ನು ತೆರವುಗೊಳಿಸಲು ಆಕ್ಷೇಪಣೆ ಹೇಳಿಕೆಗಳನ್ನು ಮತ್ತು ಪ್ರಕರಣವನ್ನು ವಿಚಾರಣೆಗೆ ತೆಗೆದುಕೊಳ್ಳುವಂತೆ Memo for Posting ಅನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ. |
| ಆ) | ಭ್ರಷ್ಟಾಚಾರದಲ್ಲಿ ಶಾಮೀಲಾದ ಅಧಿಕಾರಿಗಳಿಗೆ ಸರ್ಕಾರದ ನಿಯಮಗಳನ್ನು ಪಾಲನೆ ಮಾಡದೆ ಪದೋನ್ನತಿ ಬೇರೆ ಕಡೆ ವರ್ಗವಾಗಿ ಕಾರ್ಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಕರಣದಲ್ಲಿ ಶಾಮೀಲಾಗಿರುವ ಸಿಬ್ಬಂದಿಗಳ ಪೈಕಿ ಶ್ರೀ ಬಾಬು ಕೋಟಿ, ಕಚೇರಿ ಅಧೀಕ್ಷಕರು, ಇವರನ್ನು ಹೊರತುಪಡಿಸಿ ಬೇರೆ ಯಾವ ಅಧಿಕಾರಿ/ಸಿಬ್ಬಂದಿಗಳಿಗೆ ಪದೋನ್ನತಿ ನೀಡಿರುವುದಿಲ್ಲ. ಶ್ರೀ ಬಾಬು ಕೋಟಿ ಇವರು ವೈದ್ಯಕೀಯ ಶಿಕ್ಷಣ ಇಲಾಖೆಯಿಂದ ಬಿಡುಗಡೆಗೊಂಡು ಅವರ ಮಾತೃ ಇಲಾಖೆಯಾದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಹಿಂದಿರುಗಿದ ನಂತರ ಪದೋನ್ನತಿಯನ್ನು ಅವರ ಮಾತೃ ಇಲಾಖೆಯಿಂದ ನೀಡಲಾಗಿರುತ್ತದೆ. |
| ಇ) | ತನಿಖೆಗೆ ತಂದ ನ್ಯಾಯಾಲಯದ ತಡೆಯಾಜ್ಞೆಯನ್ನು ತೆರವುಗೊಳಿಸಲು ಇನ್ನು ಎಷ್ಟು ಕಾಲಾವಕಾಶ ಬೇಕಾಗಿದೆ ಮತ್ತು ಎಸಿಬಿ ತನಿಖೆ ಯಾವಾಗನಿಂದ ಪ್ರಾರಂಭಿಸಲಾಗುವುದು; | ಸದರಿ ಪ್ರಕರಣವನ್ನು ACBಗೆ ವಹಿಸಿ ಆದೇಶಿಸಲಾಗಿತ್ತು. ಪ್ರಸ್ತುತ, ACB ಪ್ರಕರಣಗಳನ್ನು ಮಾನ್ಯ ಲೋಕಾಯುಕ್ತಕ್ಕೆ ವರ್ಗಾವಣೆ ಮಾಡಲಾಗಿದೆ. |
| ಈ) | ಇಂತಹ ಹಗರಣಗಳ ತನಿಖೆ ಮಾಡದೆ ಮುಚ್ಚಿ ಹಾಕುವ ಹಾಗೂ ಭ್ರಷ್ಟ ಅಧಿಕಾರಿಗಳ ಬೆಂಬಲಕ್ಕೆ ನಿಲ್ಲುವ ಉದ್ದೇಶ ಸರ್ಕಾರಕ್ಕೇನಾದರೂ ಇದೆಯೇ? | ಇಲ್ಲ. |

**ಸಂಖ್ಯೆ:** ಎಂಇಡಿ 575 ಎಂಎಸ್‌ಎಫ್ 2023

**(ಡಾ: ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು